ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 5 ... ಮರಾಠ ನಿಗಮ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 21/11/20

# ಡಿ.5ಕ್ಕೆ ರಾಜ್ಯ ಬಂದ್

ಬೆಂಗಳೂರು: ಮರಾಠ ಸಮುದಾಯ ನಿಗಮ ಸ್ಥಾಪನೆ ನಿರ್ಧಾರ ವಿರೋಧಿಸಿ ಕನ್ನಡಪರ ಸಂಘಟನೆಗಳು ಡಿ.5 ರಂದು 'ಕರ್ನಾಟಕ ಬಂದ್'ಗೆ ಕರೆ ಕೊಟ್ಟಿವೆ.

ಕನ್ನಡ ಚಳವಳಿ ವಾಟಾಳ್ ಪಕ್ಷದ ನಾಯಕ ವಾಟಾಳ್ ನಾಗರಾಜ್ ನೇತೃತ್ವದಲ್ಲಿ ಶುಕ್ರವಾರ ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಸರ್ಕಾರದ ನಿಲುವಿನ ಬಗ್ಗೆ ತೀವ್ರ ಅತೃಪ್ತಿ ವ್ಯಕ್ತಪಡಿಸಲಾಯಿತು.

**ಮರಾಠ ನಿಗಮ ಸ್ಥಾಪನೆ ಖಂಡಿಸಿ ಸಂಘಟನೆಗಳ ನಿರ್ಧಾರ**

ಬಳಿಕ ಮಾತನಾಡಿದ ವಾಟಾಳ್ 'ಡಿ.5 ರಂದು ಬೆಳಗ್ಗೆ 6 ರಿಂದ ಸಂಜೆ 6 ಗಂಟೆ ವರೆಗೆ ಅಖಂಡ ಕರ್ನಾಟಕ ಸಂಪೂರ್ಣ ಬಂದ್ ಆಗಲಿದೆ. ಎಲ್ಲರೂ ಸ್ವಯಂ ಪ್ರೇರಿತರಾಗಿ ಸಹಕಾರ ನೀಡಬೇಕು' ಎಂದು ಮನವಿ ಮಾಡಿದ್ದಾರೆ. ಆ ದಿನ ಟೌನ್ ಹಾಲ್‌ನಿಂದ ಫ್ರೀಡಂ ಪಾರ್ಕ್ ವರೆಗೂ ಮೆರವಣಿಗೆ ನಡೆಸಲಾಗುತ್ತಿದೆ. 250ಕ್ಕೂ ಅಧಿಕ ಸಂಘಟನೆಗಳು ಬಂದ್‌ಗೆ ಬೆಂಬಲ ನೀಡಿವೆ. ಹೆದ್ದಾರಿ ತಡೆ ಕೂಡ ನಡೆಯಲಿದೆ ಎಂದರು. ನ.16ರಂದು ರಾಜ್ಯ ಸರ್ಕಾರ ನಿಗಮ ಸ್ಥಾಪನೆ ನಿರ್ಧಾರ ಪ್ರಕಟಿಸಿತ್ತು.

ನಿಗಮ ಸ್ಥಾಪನೆ ನಿರ್ಧಾರದಿಂದ ಸರ್ಕಾರ ಕೂಡಲೇ ನಿರ್ಧಾರದಿಂದ ಹಿಂದೆ ಸರಿಯಬೇಕು. ಬೆಳಗಾವಿ, ಹುಬ್ಬಳ್ಳಿ ಧಾರವಾಡ, ಮೈಸೂರು, ಬೀದರ್, ಮೈಸೂರು ಸೇರಿದಂತೆ ಹಲವು ಕಡೆಗಳಲ್ಲಿ ಸಭೆ ನಡೆಸಿ, ಬಂದ್‌ಗೆ ಬೆಂಬಲ ಕೋರಲಾಗುವುದು. ಹೋರಾಟಗಾರರಿಗೆ ತೊಂದರೆ ನೀಡಿದರೆ ಸರ್ಕಾರ ಗಂಭೀರ ಪರಿಸ್ಥಿತಿ ಎದುರಿಸಬೇಕಾದೀತು ಎಂದು ವಾಟಾಳ್ ನಾಗರಾಜ್ ಎಚ್ಚರಿಕೆ ನೀಡಿದ್ದಾರೆ.